ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೨೧

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತನೆಯ ಅಧಿವೇಶನ

## (ಮುಂದುವರೆದ ಉಪವೇಶನ)

**ಶುಕ್ರವಾರ, ದಿನಾಂಕ ೧೫ನೇ ಜುಲೈ, ೨೦೧೬**

---

**ಸಮೂಹ – V**

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ಉನ್ನತ ಶಿಕ್ಷಣ ಸಚಿವರು

೪. ಸಣ್ಣ ಕೈಗಾರಿಕೆ ಸಚಿವರು

೫. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು

೬. ಸಾರಿಗೆ ಸಚಿವರು

೭. ಗಣಿ ಮತ್ತು ಭೂವಿಜ್ಞಾನ ರಾಜ್ಯ ಸಚಿವರು

---

## ಕೇಂದ್ರ ಸರ್ಕಾರದ RUSA ಯೋಜನೆ ಬಗ್ಗೆ

**ಶ್ರೀ ಅಮರನಾಥ ಪಾಟೀಲ್** (ಪದವೀಧರರ ಕ್ಷೇತ್ರ) –

೩೦೧ (೨೬೧೫) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫-೧೬ ಹಾಗೂ ೨೦೧೬-೧೭ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ RUSA (ರಾಷ್ಟ್ರೀಯ ಉಚ್ಛತರ ಶಿಕ್ಷಣ ಅಭಿಯಾನ) ಯೋಜನೆಯಡಿ ಆಯ್ಕೆಯಾದ ರಾಜ್ಯದ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು; RUSA ಯೋಜನೆಯ ಮಾನದಂಡಗಳೇನು; (ಸಂಪೂರ್ಣ ವಿವರ ನೀಡುವುದು)

(ಆ) ಹೈದ್ರಾಬಾದ್-ಕರ್ನಾಟಕದಲ್ಲಿರುವ ಒಟ್ಟು ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು; ಸದರಿ ಯೋಜನೆಯಡಿ ಈ ಭಾಗದಲ್ಲಿ ಆಯ್ಕೆಯಾಗಿರುವ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು; (ಕಾಲೇಜುವಾರು, ಜಿಲ್ಲಾವಾರು, ಬಿಡುಗಡೆಯಾದ ಅನುದಾನವಾರು ಮಾಹಿತಿ ನೀಡುವುದು)

(ಇ) ಸದರಿ ಯೋಜನೆಯಡಿ ಹೈದ್ರಾಬಾದ್-ಕರ್ನಾಟಕ ಭಾಗದ ಆರು ಜಿಲ್ಲೆಗಳು ಹಾಗೂ ಹರಪನಹಳ್ಳಿ ತಾಲ್ಲೂಕಿನಲ್ಲಿ ಆಯ್ಕೆಯಾಗಿರುವ ಪ್ರಥಮ ದರ್ಜೆ ಕಾಲೇಜುಗಳು ಯಾವುವು? (ಕಾಲೇಜುವಾರು, ಅನುದಾನವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಸದರಿ ಯೋಜನೆಯಡಿ ಹೈದ್ರಾಬಾದ್-ಕರ್ನಾಟಕದ ಹಾಗೂ ಹರಪನಹಳ್ಳಿಯ ಬಹುತೇಕ ಪ್ರಥಮ ದರ್ಜೆ ಕಾಲೇಜುಗಳು RUSA ಯೋಜನೆ ಅಡಿಯಲ್ಲಿ ಅನುದಾನ ಪಡೆಯಲು ವಿಫಲವಾಗಿವೆಯೇ; ಇದ್ದರೆ, ಕಾರಣಗಳನ್ನು ನೀಡುವುದು;

(ಉ) ಈ ತಾರತಮ್ಯ ಸರಿಪಡಿಸಿ, ಸದರಿ ಭಾಗದಲ್ಲಿ ಹೆಚ್ಚಿನ ಮೂಲಭೂತ ಸೌಕರ್ಯಗಳನ್ನು ಪ್ರಥಮ ದರ್ಜೆ ಕಾಲೇಜುಗಳಿಗೆ ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಮುಂದಾಗುವುದೇ; ಇದ್ದರೆ, ಸರ್ಕಾರದ ಮುಂದಿರುವ ಯೋಜನೆಗಳೇನು? (ಮಾಹಿತಿ ನೀಡುವುದು)

# ರಾಜ್ಯದ ಕಾಲೇಜು ಮತ್ತು ವಸತಿ ನಿಲಯಗಳಲ್ಲಿ ರ್‍ಯಾಗಿಂಗ್ ಹೆಚ್ಚುತ್ತಿರುವ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೩೦೨ (೨೫೬೦) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿನ ಕಾಲೇಜು ಮತ್ತು ವಿದ್ಯಾರ್ಥಿಗಳ ವಸತಿ ನಿಲಯಗಳಲ್ಲಿ ರ್‍ಯಾಗಿಂಗ್ ದಿನೇ ದಿನೇ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಕಳೆದ ೨ ವರ್ಷಗಳಿಂದ ಇಂತಹ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ;

(ಇ) ರ್‍ಯಾಗಿಂಗ್ ಪ್ರಕರಣಗಳಲ್ಲಿ ಭಾಗಿಯಾಗಿರುವ ಎಷ್ಟು ವಿದ್ಯಾರ್ಥಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಲಾಗಿದೆ; ರ್‍ಯಾಗಿಂಗ್‌ಗೆ ಒಳಗಾದ ವಿದ್ಯಾರ್ಥಿಗಳು ಯಾರು; ಇದುವರೆವಿಗೂ ಇಂತಹ ಪ್ರಕರಣಗಳಲ್ಲಿ ಯಾವುದಾದರೂ ಪ್ರಾಣಹಾನಿ ಸಂಭವಿಸಿದೆಯೇ;

(ಈ) ಹಾಗಿದ್ದಲ್ಲಿ, ಅಂತಹ ಕಾಲೇಜು ಹಾಗೂ ವಿದ್ಯಾರ್ಥಿಗಳ ವಸತಿ ನಿಲಯಗಳು ಯಾವುವು; ಇವುಗಳ ಆಡಳಿತ ಮಂಡಳಿಯ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮ ಜರುಗಿಸಿದೆ;

(ಉ) ರ್‍ಯಾಗಿಂಗ್ ಭೂತದಿಂದ ಜೀವ ಕಳೆದುಕೊಂಡ ವಿದ್ಯಾರ್ಥಿಗಳಿಗೆ ಸರ್ಕಾರ ಯಾವ ರೀತಿಯ ಪರಿಹಾರ ನೀಡಿದೆ; ಇದನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡ ಶಿಸ್ತಿನ ಕ್ರಮಗಳೇನು?

## ವಿಶ್ವವಿದ್ಯಾಲಯಗಳಲ್ಲಿ ಭ್ರಷ್ಟಾಚಾರ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೩೦೩ (೨೫೪೧) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿನ ವಿಶ್ವವಿದ್ಯಾಲಯಗಳಲ್ಲಿ ಭ್ರಷ್ಟಾಚಾರದ ಆರೋಪಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ೨೦೦೯ ರಿಂದ ೨೦೧೬ನೇ ಸಾಲಿನ ಜೂನ್‌ವರೆಗೆ ರಾಜ್ಯದಲ್ಲಿನ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ವೃಂದವಾರು ಎಷ್ಟು ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗಿದೆ; ಮಾಡಿಕೊಂಡಿದ್ದಲ್ಲಿ ವರ್ಷವಾರು, ವಿಶ್ವವಿದ್ಯಾಲಯಗಳವಾರು ಸಂಪೂರ್ಣ ಮಾಹಿತಿ ನೀಡುವುದು;

(ಇ) ಹುದ್ದೆಗಳನ್ನು ಭರ್ತಿ ಮಾಡಿಕೊಂಡಿದ್ದಲ್ಲಿ ಆಯ್ಕೆಯಾದ ಫಲಾನುಭವಿಗಳ ಪಟ್ಟಿ ನೀಡುವುದು ಯಾವ ರೀತಿಯಲ್ಲಿ ಯಾವ ಮಾನದಂಡಗಳ ಅಡಿಯಲ್ಲಿ ನೇಮಕ ಮಾಡಿಕೊಳ್ಳಲಾಗಿದೆ;

(ಈ) ಆಯಾಯ ವಿಶ್ವವಿದ್ಯಾಲಯಗಳವಾರು ಆಯ್ಕೆ ಮಾಡಿದ ದಿನಾಂಕದ ವಿವರ ನೀಡುವುದು?

## ಶಿವಮೊಗ್ಗ ತಾಲ್ಲೂಕು ಉಂಬಳೆಬೈಲು ಪಂಚಾಯಿತಿ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೩೦೪ (೨೫೭೪) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ತಾಲ್ಲೂಕು, ಉಂಬಳೆಬೈಲು ಪಂಚಾಯಿತಿ ವ್ಯಾಪ್ತಿಯಲ್ಲಿನ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಭದ್ರಾ ಹಿನ್ನೀರು ಹಾಗೂ ತುಂಗಾ ಹಿನ್ನೀರಿನ ಮಧ್ಯೆ ಇರುವ ಉಂಬಳೆಬೈಲು ಪಂಚಾಯಿತಿ ಹಳ್ಳಿಗಳಿಗೆ ಕುಡಿಯುವ ನೀರನ್ನು ಶಾಶ್ವತವಾಗಿ ಪೂರೈಕೆ ಮಾಡಲು ಸರ್ಕಾರದ ಮುಂದಿರುವ ಯೋಜನೆಗಳೇನು; (ವಿವರ ನೀಡುವುದು)

(ಇ) ಉಂಬಳೆಬೈಲು ಪಂಚಾಯಿತಿಗೆ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತವಾಗಿ ಪರಿಹಾರ ರೂಪಿಸಲು ಸರ್ಕಾರದ ಮುಂದೆ ಪ್ರಸ್ತಾಪಗಳು ಇವೆಯೇ; ಇದ್ದರೆ, ಅವು ಯಾವುವು? (ವಿವರ ನೀಡುವುದು)

## ಮಂಗಳೂರು ರೈಲ್ವೆ ನಿಲ್ದಾಣವನ್ನು ಅಂತರರಾಷ್ಟ್ರೀಯ ದರ್ಜೆಗೆ ಏರಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೩೦೫ (೨೫೩೭) ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ರೈಲ್ವೆ ನಿಲ್ದಾಣವನ್ನು ಅಂತರರಾಷ್ಟ್ರೀಯ ದರ್ಜೆಗೆ ಏರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಅಂತರರಾಷ್ಟ್ರೀಯ ಮಟ್ಟದ ರೈಲ್ವೆ ನಿಲ್ದಾಣ ಬೇರೆ ರಾಜ್ಯಗಳಲ್ಲಿ ಇದೆಯೇ; (ವಿವರ ಒದಗಿಸುವುದು)

(ಆ) ಮಂಗಳೂರು ರೈಲ್ವೆ ನಿಲ್ದಾಣವನ್ನು ಮಂಗಳೂರು ವಲಯವನ್ನಾಗಿ ಸ್ಥಾಪಿಸಬೇಕೆಂಬ ಬೇಡಿಕೆ ಯಾವ ಹಂತದಲ್ಲಿದೆ; ಈ ಬಗ್ಗೆ ಇಲಾಖೆ ಕ್ರಮ ಕೈಗೊಂಡಿದೆಯೇ;

(ಇ) ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ರಾಜ್ಯದಲ್ಲಿ ರೈಲ್ವೆ ಇಲಾಖೆಯಿಂದ ಕೈಗೊಳ್ಳುತ್ತಿರುವ ಯೋಜನೆಗಳಾವುವು; ಅವು ಯಾವ ಹಂತದಲ್ಲಿದೆ; (ವಿವರ ನೀಡುವುದು)

(ಈ) ರೈಲ್ವೆ ಇಲಾಖೆಯಿಂದ ಪಡೀಲ್ ಅಂಡರ್ ಬ್ರಿಡ್ಜ್ ಸ್ಥಾಪನೆ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; (ವಿವರ ಒದಗಿಸುವುದು)

(ಉ) ೨೦೧೫–೧೬ನೇ ಸಾಲಿನಲ್ಲಿ ರೈಲ್ವೆ ಇಲಾಖೆಗೆ ರಾಜ್ಯ ಸರ್ಕಾರದಿಂದ ನೀಡಿದ ಒಟ್ಟು ಅನುದಾನವೆಷ್ಟು?

## ಗ್ರಾಮ ಪಂಚಾಯಿತಿ ವ್ಯಾಪ್ತಿಯ ಆಸ್ತಿಗಳಿಗೆ ಹಕ್ಕು ಪತ್ರ ನೀಡುವುದು

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ.** (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೩೦೬ (೨೫೫೩) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಎಷ್ಟು ಜಿಲ್ಲೆಗಳಿಗೆ ಇ–ಸ್ವತ್ತು ತಂತ್ರಾಂಶದಿಂದ ವಿನಾಯಿತಿ ನೀಡಲಾಗಿದೆ;

(ಆ) ಕೊಡಗು ಜಿಲ್ಲೆಗೆ ಇ–ಸ್ವತ್ತು ತಂತ್ರಾಂಶದಿಂದ ವಿನಾಯಿತಿ ನೀಡಲಾಗಿದೆಯೇ; ಇಲ್ಲವಾದಲ್ಲಿ, ಕಾರಣಗಳೇನು;

(ಇ) ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಕ್ರಮಬದ್ಧ ಆಸ್ತಿಗಳಿಗೆ ನಮೂನೆ–೯ ಮತ್ತು ೧೧ಎ ನ್ನು ವಿತರಿಸಲು ಹಾಗೂ ಕ್ರಮಬದ್ಧವಲ್ಲದ ಆಸ್ತಿಗಳನ್ನು ನಮೂನೆ–೧೧ಬಿ ಮೂಲಕ ವಿತರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ಬೆಳಗಾವಿ ಜಿಲ್ಲೆ, ಹೂಲಿ ಗ್ರಾಮಕ್ಕೆ ಕುಡಿಯುವ ನೀರು ಪೂರೈಸುವುದು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್** (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೩೦೭ (೨೫೨೩) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಹೂಲಿ ಗ್ರಾಮದ ಸಾರ್ವಜನಿಕರಿಗೆ ಕುಡಿಯುವ ನೀರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಮಲಪ್ರಭಾ ನದಿಯಿಂದ ಹೂಲಿ ಗ್ರಾಮಕ್ಕೆ ಕುಡಿಯುವ ನೀರು ಸರಬರಾಜು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಈ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ಸಿಕ್ಕಿರುತ್ತದೆಯೇ;

(ಇ) ಹಾಗಿದ್ದರೆ, ಈ ಯೋಜನೆಗೆ ಮೀಸಲಿಟ್ಟ ಅನುದಾನವೆಷ್ಟು; ಕಾಮಗಾರಿಯನ್ನು ಪ್ರಾರಂಭಿಸಲಾಗುವುದು ಯಾವಾಗ; ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಯಾವ ಕಾಲಮಿತಿಯನ್ನು ಗೊತ್ತುಪಡಿಸಲಾಗಿದೆ?

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಗ್ರಾಮ ಪಂಚಾಯಿತಿ ಸಿಬ್ಬಂದಿಗಳ ಅನುಮೋದನೆ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**

೩೦೮ (೨೪೯೭) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಗ್ರಾಮ ಪಂಚಾಯಿತಿಗಳಲ್ಲಿ ಗುಮಾಸ್ತರ ಹುದ್ದೆಗೆ ಹಿಂದಿನ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ. (ಪ್ರೌಢ ಶಿಕ್ಷಣ) ಹೊಂದಿದ್ದು ಸೇವೆಗೆ ಸೇರಿ ಸುಮಾರು ೧೦ ವರ್ಷಕ್ಕೂ ಹೆಚ್ಚು ಸೇವೆ ಪೂರೈಸಿ, ಇದುವರೆಗೂ ಅನುಮೋದನೆಗೆ ಒಳಪಡದ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ಗ್ರಾಮ ಪಂಚಾಯತ್‌ವಾರು ಸಿಬ್ಬಂದಿಗಳ ಸೇವಾ ಅವಧಿ, ಹೆಸರು ವಿಳಾಸದೊಂದಿಗೆ ವಿವರ ನೀಡುವುದು)

(ಆ) ಮೇಲೆ ತಿಳಿಸಿದಂತೆ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಗಳಿಗೆ ಪಿ.ಎಫ್. ಮತ್ತು ಇತರೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುವುದು; ಇಲ್ಲವಾದಲ್ಲಿ, ಕಾರಣವೇನು;

(ಇ) ಗ್ರಾಮ ಪಂಚಾಯಿತಿಗಳಲ್ಲಿ ೧೦ ವರ್ಷಕ್ಕೂ ಹೆಚ್ಚು ಅವಧಿಯಿಂದ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಗಳ ಅನುಮೋದನೆಗೆ ಏನು ಕ್ರಮ ಕೈಗೊಳ್ಳಲಾಗುವುದು;

(ಈ) ಉದ್ಯೋಗ ಭದ್ರತೆ ಸೌಲಭ್ಯ ಮತ್ತು ಕಾರ್ಮಿಕ ಕಾಯಿದೆಯನ್ನು ಒಪ್ಪಿ ಗೌರವಿಸಬೇಕಾದದ್ದು ಇಲಾಖೆಯ ಹೊಣೆಯಲ್ಲವೇ; ಸರಿಪಡಿಸಲು ಕ್ರಮ ಕೈಗೊಳ್ಳಲಾಗುವುದೇ?

## ಮಂಡ್ಯ ಜಿಲ್ಲೆಯ ಕೊಪ್ಪದ ಸರ್ಕಾರಿ ಬಸ್ ನಿಲ್ದಾಣದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೦೯ (೨೬೧೩) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಕೊಪ್ಪ ಹೋಬಳಿ, ಕೊಪ್ಪದಲ್ಲಿ ಸರ್ಕಾರಿ ಬಸ್ ನಿಲ್ದಾಣದ ನಿರ್ಮಾಣಕ್ಕೆ ಯಾವ ದಿನಾಂಕದಂದು ಜಮೀನು ವಶಪಡಿಸಿಕೊಳ್ಳಲಾಯಿತು; (ಮಾಹಿತಿ ನೀಡುವುದು)

(ಆ) ಕೊಪ್ಪದಲ್ಲಿ ಸರ್ಕಾರಿ ಬಸ್ ನಿಲ್ದಾಣದ ಕಾಮಗಾರಿಯು ಅರ್ಧಕ್ಕೆ ನಿಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇದಕ್ಕೆ ಕಾರಣಗಳೇನು ಹಾಗೂ ಯಾರು ಹೊಣೆಗಾರರು; (ಮಾಹಿತಿ ನೀಡುವುದು)

(ಇ) ಸದರಿ ಕಾಮಗಾರಿಯನ್ನು ನಿರ್ವಹಿಸುತ್ತಿರುವ ಗುತ್ತಿಗೆದಾರರು ಯಾರು; ಅವರ ವಿವರ ನೀಡುವುದು;

(ಈ) ಕೊಪ್ಪದಲ್ಲಿನ ಸಾರ್ವಜನಿಕರಿಗೆ ಸೂಕ್ತ ಬಸ್ ನಿಲ್ದಾಣವಿಲ್ಲದೆ ದಿನ ನಿತ್ಯ ಪರಿತಪಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು;

(ಉ) ಈ ಬಸ್ ನಿಲ್ದಾಣದ ಕಾಮಗಾರಿಯು ಅರ್ಧಕ್ಕೆ ನಿಂತಿರುವುದನ್ನು ಎಷ್ಟು ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು? (ಮಾಹಿತಿ ನೀಡುವುದು)

## ರಾಜ್ಯದ ಖಾಸಗಿ ಅನುದಾನಿತ ಪದವಿ ಪೂರ್ವ ಹಾಗೂ ಪ್ರೌಢ ಶಾಲೆಗಳಲ್ಲಿ ನಿಧನ/ನಿವೃತ್ತಿಯಿಂದ ಖಾಲಿಯಾಗಿರುವ ಹುದ್ದೆಗಳನ್ನು ತುಂಬಿಕೊಳ್ಳುವ ಬಗ್ಗೆ

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೩೧೦ (೨೫೯೮) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಖಾಸಗಿ ಅನುದಾನಿತ ಪದವಿ ಪೂರ್ವ ಹಾಗೂ ಪ್ರೌಢ ಶಾಲೆಗಳಲ್ಲಿ ನಿಧನ/ನಿವೃತ್ತಿ ಮತ್ತು ರಾಜೀನಾಮೆಯಿಂದ ಖಾಲಿಯಾಗಿರುವ ಹುದ್ದೆಗಳನ್ನು ಅನುಕ್ರಮವಾಗಿ ೨೦೧೩ ಹಾಗೂ ೨೦೧೪ರವರೆಗೆ ತುಂಬಿಕೊಳ್ಳಲು ಅನುಮತಿ ನೀಡಿದ್ದು ನಿಜವೇ;

(ಆ) ನೇಮಕಾತಿಗಾಗಿ ಹಾಕಿರುವ ಆರ್ಥಿಕ ಮಿತವ್ಯಯವನ್ನು ಸಡಿಲಗೊಳಿಸಲು ಇಲ್ಲಿಯವರೆಗೆ ಖಾಲಿಯಾಗಿರುವ ಎಲ್ಲಾ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡಲು ಸರ್ಕಾರ ಚಿಂತನೆ ನಡೆಸಿದೆಯೇ; ಹಾಗಿದ್ದಲ್ಲಿ, ಯಾವ ದಿನಾಂಕದವರೆಗೆ ಆರ್ಥಿಕ ಮಿತವ್ಯಯವನ್ನು ಸಡಿಲಪಡಿಸುವಿರಿ;

(ಇ) ಖಾಲಿಯಾಗಿರುವ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡದೆ ಇದ್ದಲ್ಲಿ, ಶಿಕ್ಷಣದ ಗುಣಮಟ್ಟವನ್ನು ಕಾಯ್ದುಕೊಳ್ಳಲು ಸಾಧ್ಯವೇ?

## ಶಾಲೆ ಜಾಗ ಅತಿಕ್ರಮಣ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೧೧ (೨೫೦೬) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಿಜಯಪುರ ನಗರದ ಪಿ.ಡಿ.ಜೆ. ಮಾಧ್ಯಮಿಕ ಶಾಲೆಯ ಜಾಗವು ಅತಿಕ್ರಮಣವಾಗಿರುವ ಆರೋಪ ಸರ್ಕಾರದ ಗಮನಕ್ಕೆ ಬಂದಿದೆಯೇ, ಹಾಗೂ ಅತಿಕ್ರಮಣ ಮಾಡಿದ ಜಾಗದಲ್ಲಿ ಕಟ್ಟಡ ನಿರ್ಮಾಣ ಕೈಗೊಳ್ಳಲು ಅನುಮತಿ ನೀಡಲಾಗಿದೆಯೇ; (ವಿವರ ನೀಡುವುದು)

(ಆ) ಸದರಿ ಅತಿಕ್ರಮಣ ಮಾಡಿರುವ ಪ್ರದೇಶದಲ್ಲಿ ನಿರ್ಮಾಣವಾಗಿರುವ ಕಟ್ಟಡವನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ದಿಟ್ಟ ಕ್ರಮಗಳು ಯಾವುವು; ಕ್ರಮ ಕೈಗೊಂಡಿದ್ದಲ್ಲಿ, ಅಕ್ರಮವಾಗಿ ನಿರ್ಮಾಣವಾಗಿರುವ ಕಟ್ಟಡವನ್ನು ತೆರವುಗೊಳಿಸಿ, ಶಾಲೆಯ ಸಂಪೂರ್ಣ ಜಾಗಕ್ಕೆ ಹದ್ದುಬಸ್ತು ಗುರುತಿಸಲು ಕ್ರಮ ಕೈಗೊಳ್ಳಲಾಗಿದೆಯೇ? (ಮಾಹಿತಿ ನೀಡುವುದು)

## ಮೌಲ್ಯಮಾಪನದಲ್ಲಿನ ಅವ್ಯವಸ್ಥೆ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು)** –

೩೧೨ (೨೫೮೭) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಿದ್ಯಾರ್ಥಿಗಳ ಭವಿಷ್ಯದಲ್ಲಿ ಮೌಲ್ಯಮಾಪಕರು ಆಟವಾಡುತ್ತಿದ್ದು, ಮೌಲ್ಯಮಾಪನದಲ್ಲಿ ಅವಾಂತರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳೇನು?

## ಶಿಕ್ಷಣ ಇಲಾಖೆಯಲ್ಲಿನ ವೈದ್ಯಕೀಯ ಬಿಲ್ಲಿನ ಮರುಪಾವತಿ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ** (ಪದವೀಧರರ ಕ್ಷೇತ್ರ) –

೩೧೩ (೨೬೩೧) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಬಿ.ಇ.ಓ. ಮತ್ತು ಡಿ.ಡಿ.ಪಿ.ಐ. ಕಛೇರಿಗಳಲ್ಲಿ ಪಾವತಿಯಾಗದೇ ಉಳಿದಿರುವ ವೈದ್ಯಕೀಯ ವೆಚ್ಚ ಮರುಪಾವತಿಯ ಬಿಲ್ಲುಗಳ ಸಂಖ್ಯೆ ಎಷ್ಟು;

(ಆ) ಎಷ್ಟು ವರ್ಷದಿಂದ ಬಾಕಿ ಇವೆ; ಬಾಕಿ ಇರುವ ಬಿಲ್ಲುಗಳ ಒಟ್ಟು ಮೊತ್ತವೆಷ್ಟು; ಪಾವತಿಯಾಗದೇ ಇರಲು ಕಾರಣಗಳೇನು;

(ಇ) ಬಿಲ್ಲುಗಳು ಪಾವತಿಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ವಿಳಂಬಕ್ಕೆ ಕಾರಣವಾದವರ ಮೇಲೆ ಕೈಗೊಂಡ ಕ್ರಮಗಳೇನು;

(ಈ) ಸರ್ಕಾರ ಬಿಲ್ಲುಗಳನ್ನು ಪಾವತಿಸುವ ಬಗ್ಗೆ ಕ್ರಮ ತೆಗೆದುಕೊಳ್ಳುವುದೇ?

## ವಿಧಾನ ಪರಿಷತ್ ಸದಸ್ಯರಿಗೆ ಲೆಕ್ಕಶೀರ್ಷಿಕೆ ೩೦೫೪ ರಲ್ಲಿ ಅನುದಾನ ನೀಡುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು)** –

೩೧೪ (೨೫೪೬) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ ೩೦೫೪ ರಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗಳಲ್ಲಿ ವಿಧಾನ ಪರಿಷತ್ ಸದಸ್ಯರು ವಾಸಿಸುವ ವಿಧಾನ ಸಭಾ ಕ್ಷೇತ್ರಗಳಲ್ಲಿ ಪರಿಷತ್ ಸದಸ್ಯರು ಸೂಚಿಸಿದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಉದ್ದೇಶ ಸರ್ಕಾರಕ್ಕೆ ಇದೆಯೇ;

(ಆ) ಇದ್ದಲ್ಲಿ, ಸಂಬಂಧಪಟ್ಟ ಅಧಿಕಾರಿಗಳಿಗೆ ಅಧಿಕೃತವಾಗಿ ಸೂಚಿಸಲಾಗಿದೆಯೇ?

## ಶಾದಿ ಭಾಗ್ಯ ಯೋಜನೆಯ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)** –

೩೧೫ (೨೫೭೮) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸರ್ಕಾರದ ಮಹತ್ವಾಕಾಂಕ್ಷೆಯ "ಶಾದಿ ಭಾಗ್ಯ" ಯೋಜನೆ ಜಾರಿಯಲ್ಲಿದ್ದರೂ, ಅರ್ಹ ಫಲಾನುಭವಿಗಳಿಗೆ ಅನುದಾನ ಬಿಡುಗಡೆಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಯೋಜನೆ ಪ್ರಾರಂಭವಾದ ದಿನಾಂಕದಿಂದ ಇಲ್ಲಿಯವರೆಗೆ ಸಲ್ಲಿಕೆಯಾದ ಅರ್ಜಿಗಳೆಷ್ಟು; ಆಯ್ಕೆಯಾದ ಫಲಾನುಭವಿಗಳೆಷ್ಟು; ಅನುದಾನ ಬಿಡುಗಡೆಗೆ ಬಾಕಿ ಇರುವ ಪ್ರಕರಣಗಳೆಷ್ಟು; (ಜಿಲ್ಲಾ-ವರ್ಷವಾರು ವಿವರ ನೀಡುವುದು) (ಹಾವೇರಿ ಜಿಲ್ಲೆಯ ಗ್ರಾಮ-ತಾಲ್ಲೂಕುವಾರು ಪ್ರತ್ಯೇಕ ವಿವರ ಒದಗಿಸುವುದು)

(ಇ) ಕೆಲವು ಜಿಲ್ಲೆಗಳಲ್ಲಿ ಅರ್ಜಿ ಸಲ್ಲಿಸಿ, ವರ್ಷ ಕಳೆದರೂ, ಅರ್ಹ ಫಲಾನುಭವಿಗೆ ಹಣ ನೀಡದೇ ಇರುವುದು ನಿಜವೇ; ನಿಜವಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

**ಶ್ರೀನಿವಾಸ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ನಿರ್ದೇಶಕರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. ಕಾಸೂ 353-15 [illegible]) ಪ್ರತಿಗಳು ([illegible]